# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 600(750)
2. ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 18.08.2025
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮಂಡ್ಯ ಜಿಲ್ಲೆಯ ವಿಜ್ಞಾನಗಳ ಸಂಸ್ಥೆಯಲ್ಲಿ (ಮಿಮ್ಸ್) ನರ್ಸಿಂಗ್ ಕಾಲೇಜು ಯಾವ ಸಾಲಿನಿಂದ ಆರಂಭಗೊಂಡಿದೆ; ಪ್ರತಿ ವರ್ಷ ಇಲ್ಲಿ ಎಷ್ಟು ಸಂಖ್ಯೆಯ ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶವಿದೆ; ಹಾಲಿ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ; | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ ಈ ಸಂಸ್ಥೆಯಲ್ಲಿ 2021-22ನೇ ಸಾಲಿನಿಂದ ನರ್ಸಿಂಗ್ ಕಾಲೇಜನ್ನು ಪ್ರಾರಂಭಿಸಲಾಗಿರುತ್ತದೆ. ಪ್ರತಿ ವರ್ಷ 100 ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶವಿರುತ್ತದೆ. ಇಲ್ಲಿಯವರೆವಿಗೆ ಒಟ್ಟಾರೆ 400 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಪ್ರಸ್ತುತ 380 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. |
| (ಆ) | ನರ್ಸಿಂಗ್ ಕೌನ್ಸಿಲ್ ನಿಯಮಾವಳಿಗಳ ಪ್ರಕಾರ ನರ್ಸಿಂಗ್ ಕಾಲೇಜು ಆರಂಭಿಸಲು ಪ್ರತ್ಯೇಕ ಕಟ್ಟಡ ಹೊಂದುವುದು ಸೇರಿದಂತೆ ಯಾವ ಯಾವ ಮೂಲಸೌಲಭ್ಯಗಳನ್ನು ಹೊಂದುವುದು ಅವಶ್ಯಕ/ಕಡ್ಡಾಯವಾಗಿರುತ್ತದೆ; | ಭಾರತೀಯ ಶುಶ್ರೂಷ ಪರಿಷತ್ತಿನ ನಿಯಮಾವಳಿಗಳ ಪ್ರಕಾರ ನರ್ಸಿಂಗ್ ಕಾಲೇಜು ಪ್ರಾರಂಭಿಸಲು ಪ್ರತ್ಯೇಕ ಕಟ್ಟಡ ಹೊಂದುವುದು ಸೇರಿದಂತೆ ನುರಿತ ಬೋಧನಾ ಸಿಬ್ಬಂದಿ, ಸುಸಜ್ಜಿತ ಪ್ರಯೋಗಾಲಯ, ವಾಹನ ವ್ಯವಸ್ಥೆ, ಗ್ರಂಥಾಲಯ ಸೌಲಭ್ಯ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಹೊಂದುವುದು ಅವಶ್ಯಕ ವಾಗಿರುತ್ತದೆ. ಸದರಿ ಎಲ್ಲಾ ಮೂಲಭೂತ ಸೌಲಭ್ಯಗಳು ಸಂಸ್ಥೆಯಲ್ಲಿಯೇ ಲಭ್ಯವಿರುವುದರಿಂದ ನರ್ಸಿಂಗ್ ಕಾಲೇಜನ್ನು ಪ್ರಾರಂಭಿಸಿ, ವಿದ್ಯಾರ್ಥಿಗಳಿಗೆ ಪಾಠ ಪ್ರವಚನ ನೀಡಲಾಗುತ್ತಿದೆ. |
| (ಇ) | ನರ್ಸಿಂಗ್ ಕಾಲೇಜು ಆರಂಭವಾಗಿ 4 ವರ್ಷಗಳು ಕಳೆದಿದ್ದು ಪ್ರತ್ಯೇಕ ಕಟ್ಟಡ ಇಲ್ಲದ್ದರಿಂದ ಮಿಮ್ಸ್ ನಲ್ಲಿಯೇ ಕಾರ್ಯನಿರ್ವಹಿಸುತ್ತಿದೆ ಹಾಗಾಗಿ ನರ್ಸಿಂಗ್ ಕಾಲೇಜು & ಹಾಸ್ಟೆಲ್‌ಗಾಗಿ ಪ್ರತ್ಯೇಕ ಸ್ಥಳ ಹಾಗೂ ಕಟ್ಟಡ ನಿರ್ಮಿಸಲು ಅವಶ್ಯವಿರುವ ಅನುದಾನ ಒದಗಿಸುವ ಕುರಿತು ಸರ್ಕಾರದ ನಿಲುವೇನು? (ಸಂಪೂರ್ಣ ವಿವರ ನೀಡುವುದು) | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕಟ್ಟಡ ನಿರ್ಮಾಣ ಮಾಡಲು ಸ್ಥಳಾವಕಾಶದ ಕೊರತೆ ಇರುತ್ತದೆ. ಪ್ರಸ್ತುತ ಸಂಸ್ಥೆಯಲ್ಲಿ ಲಭ್ಯವಿರುವ ಉಪನ್ಯಾಸ ಕೊಠಡಿಗಳಲ್ಲಿಯೇ ನರ್ಸಿಂಗ್ ವಿದ್ಯಾರ್ಥಿಗಳಿಗೆ ಯಾವುದೇ ಅನಾನೂಕೂಲ ವಾಗದಂತೆ ಪಾಠ ಪ್ರವಚನ ನೀಡಲಾಗುತ್ತಿದೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ನರ್ಸಿಂಗ್ ಕಾಲೇಜು & ಹಾಸ್ಟೆಲ್‌ಗಾಗಿ ಪ್ರತ್ಯೇಕ ಸ್ಥಳಾವಕಾಶ ಲಭ್ಯವಾದ ನಂತರ, ಈ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ:** ಎಂಇಡಿ 645 ಎಂಪಿಎಸ್ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.